uploaded

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡೇ-ನಲ್ಮ್ ಅಭಿಯಾನ ಯೋಜನೆಯಡಿ ರಚಿಸಲಾಗಿರುವ ಮಹಿಳಾ ಸ್ವ-ಸಹಾಯ ಗುಂಪುಗಳ ಸಮೀಕ್ಷೆ ಮತ್ತು ಮೌಲ್ಯಮಾಪನವನ್ನು M/s Azim Premji Philanthropic Initiative (APPI) ರವರ ಮೂಲಕ ಕೈಗೊಳ್ಳುವ ಕುರಿತು.

**ಓದಲಾಗಿದೆ:** ಅಭಿಯಾನ ನಿರ್ದೇಶಕರು, ಡೇ-ನಲ್ಮ್ ಇವರ ಏಕ ಕಡತ ಸಂ.ಅನಿಕ 89 ಡೇ-ನಲ್ಮ್ 2020-21.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕಡತದಲ್ಲಿ ಮೆ: Azim Premji University ಮೂಲಕ ಡೇ-ನಲ್ಮ್ ಅಭಿಯಾನದ ಸಾಮಾಜಿಕ, ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ ಉಪಘಟಕದಡಿ ಸ್ವ-ಸಹಾಯ ಸಂಘಗಳ ಅಧ್ಯಯವನ್ನು ಕೈಗೊಳ್ಳುವ ಕುರಿತು ಸರ್ಕಾರದಿಂದ 4(ಜಿ) ವಿನಾಯಿತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ ರವರು ಸಾಮಾಜಿಕ ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ ಉಪಘಟಕ (SMID) ವನ್ನು ಅನುಷ್ಠಾನಗೊಳಿಸಲು ಹೊರಡಿಸಿರುವ ಅನುಷ್ಠಾನ ಮಾರ್ಗಸೂಚಿ ಪುಟ ಸಂ.38ರ ಸೆಕ್ಷನ್ ಜಿ ರಲ್ಲಿ ಈ ಕೆಳಗಿನಂತೆ ಅವಕಾಶ ಕಲ್ಪಿಸಲಾಗಿರುತ್ತದೆ.

**Section G: Monitoring & Evaluation**

DAY-NULM is process intensive and at levels it will constantly review, assess and learn from the qualitative and quantitative progress achieved. A robust IT-based Monitoring & Evaluation MIS would be in place to facilitate this and support informed decision making at all levels. The SULM will put in place various mechanisms for monitoring the progress of the programme in the state. These will include:

1. Accountability in SHGs including institutional self-monitoring, peer internal audit of processes and local social audit.
2. MIS based input-output monitoring.
3. Independent social audit and third-party evaluation.
4. Impact assessments through baseline assessments and impact evaluation studies on key result indicators.
5. Annual reports.

ಮೇಲಿನ ಕ್ರ.ಸಂ.3 & 4 ರಲ್ಲಿ 3ನೇ ವ್ಯಕ್ತಿ ಮೂಲಕ ಸಮೀಕ್ಷೆ ಮತ್ತು ಮೌಲ್ಯಮಾಪನವನ್ನು ಮಾಡಿಸಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, 2020-21ನೇ ಸಾಲಿನ ಡೇ-ನಲ್ಮ್ ಕ್ರಿಯಾ ಯೋಜನೆಯಲ್ಲಿ ಸಮೀಕ್ಷೆ ಮತ್ತು ಮೌಲ್ಯಮಾಪನ ಕೈಗೊಳ್ಳಲು ರೂ.90.00ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿರುತ್ತದೆ. ಮೆ: Azim Premji University ರವರು ರಾಜ್ಯದ ಎಲ್ಲಾ ಜಿಲ್ಲೆ ಮತ್ತು ಮಹಾನಗರ ಪಾಲಿಕೆಗಳನ್ನೊಳಗೊಂಡಂತೆ 377 ಸ್ವ-ಸಹಾಯ ಸಂಘಗಳನ್ನು Random ಆಗಿ ಆಯ್ಕೆ ಮಾಡಿಕೊಂಡು ಅಧ್ಯಯವನ್ನು ಕೈಗೊಳ್ಳುವುದಾಗಿ ಹಾಗೂ ಸದರಿ ಅಧ್ಯಯನಕ್ಕೆ ತಗಲುವ ವೆಚ್ಚ ರೂ.15.00ಲಕ್ಷಗಳಾಗುವುದಾಗಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

....2/-

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 195 ಉಜೀಇ 2021 ಬೆಂಗಳೂರು, ದಿ: 14.02.2022**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಡೇ-ನಲ್ಮ್ ಅಭಿಯಾನ ಯೋಜನೆಯಡಿ ನಗರ ಪ್ರದೇಶದಲ್ಲಿನ ಸ್ವ-ಸಹಾಯ ಗುಂಪುಗಳ ಸಾಮಾಜಿಕ-ಆರ್ಥಿಕ ಸಮೀಕ್ಷೆ ಮಾಡಿಸಲು ಹಾಗೂ Livelihood Activities of SHG ಅಧ್ಯಯನ ವರದಿ ನೀಡಲು M/s Azim Premji University ಸಂಸ್ಥೆಯ ಸೇವೆಯನ್ನು ರೂ.15.00 ಲಕ್ಷಗಳ ವೆಚ್ಚದಲ್ಲಿ ನೇರವಾಗಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:-**

1) ಡೇ-ನಲ್ಮ್ ಅಡಿ ರಚಿಸಿರುವ ಸ್ವ-ಸಹಾಯ ಸಂಘಗಳ ಸದಸ್ಯರ ಸಾಮಾಜಿಕ ಮತ್ತು ಆರ್ಥಿಕ ಪರಿಸ್ಥಿತಿಯ ಬಗ್ಗೆ ಮಾಹಿತಿ ನೀಡುವುದು.
2) ಆರ್ಥಿಕ ಒಳಗೊಳ್ಳುವಿಕೆಯನ್ನು ಒಳಗೊಂಡಂತೆ ಪ್ರಸ್ತುತ ಪರಿಸ್ಥಿತಿಯ ಅಧ್ಯಯನ
3) ಸದರಿಯವರು ಕೈಗೊಂಡಿರುವ ಆರ್ಥಿಕ ಚಟುವಟಿಕೆಗಳ ಅಧ್ಯಯನ
4) ಸುಮಾರು 21325 SHG ಗಳಲ್ಲಿ Random ಆಗಿ 377 SHGಗಳನ್ನು ಆಯ್ಕೆ ಮಾಡಿಕೊಂಡು ಅಧ್ಯಯನಕ್ಕೆ ಪರಿಗಣಿಸುವುದು.
5) ಅಂತಿಮ ವರದಿಯಲ್ಲಿ ಆರ್ಥಿಕ ಒಳಗೊಳ್ಳುವಿಕೆ ಹಾಗೂ ಆರ್ಥಿಕ ಚಟುವಟಿಕೆಗಳನ್ನೊಳ-ಗೊಂಡಂತೆ SHG ಗಳ ಪ್ರಸ್ತುತ ಸ್ಥಿತಿಗತಿಯ ವರದಿ ಮತ್ತು ಗುರಿ ಸಾಧಿಸಲು ಇರುವ ಅಡೆತಡೆಗಳ ಬಗ್ಗೆ ವಿವರ ಮತ್ತು ಶಿಫಾರಸ್ಸುಗಳ ಬಗ್ಗೆ ಮಾಹಿತಿ ಒದಗಿಸುವುದು.
6) 06 ತಿಂಗಳೊಳಗೆ ವರದಿ ನೀಡತಕ್ಕದ್ದು.

ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸತಕ್ಕದ್ದು. ಹಾಗೂ ಅಭಿಯಾನ ನಿರ್ದೇಶಕರು, ಡೇ-ನಲ್ಮ್ ರವರು ದೃಢಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅಧಿಸೂಚನೆ ಸಂ.**ಆಇ 60 ವೆಚ್ಚ-12/2022 ದಿನಾಂಕ:01.02.2022**ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/02/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

ಇವರಿಗೆ:

(4) copies
14/2/22
17:45

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ.) ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಕೌಶಲ್ಯ ಭವನ, ಬೆಂಗಳೂರು-29.
3. ಅಭಿಯಾನ ನಿರ್ದೇಶಕರು, ಡೇ-ನಲ್ಮ್, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12), ವಿಧಾನಸೌಧ, ಬೆಂಗಳೂರು.

15/2/22

. . . 3/-

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಉಜೀ ಇಲಾಖೆ
2. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
3. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
4. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.